*ಓ.ಎಸ್.ನಂ.10/2021.*

*ಪಿ ಡಬ್ಲ್ಯೂ-1*

*ದಿಃ 30-05-2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.*

*ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ.*

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನ್ನ ಸ್ವಂತ ಮಾಹಿತಿ ಮೇರೆಗೆ ಹೇಳಿ ಬರೆಸಿದ್ದು ಅವು ಸತ್ಯವಾಗಿರುತ್ತವೆ. ಪ್ರಮಾಣಪತ್ರದಲ್ಲಿನ ಸಂಗತಿಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ನ್ಯಾಯಾಲಯಕ್ಕೆ ದಾವ ಆಸ್ತಿಗೆ ಸಂಬಂಧಪಟ್ಟಂತೆ ದಿಃ *08-01-2003* ರ ಒಂದು ನೊಂದಾಯಿತ ವಿಭಾಗ ಯಾನೆ ಪಾಲು ಪರಿಕತ್ತು ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*1* ಎಂದು ಗುರುತಿಸಲಾಯಿತು. ದಾವ ಆಸ್ತಿಗೆ ಸಂಬಂಧಪಟ್ಟಂತೆ ಆಸ್ತಿ ತೆರಿಗೆ ಬೇಡಿಕೆ ಸಂಗ್ರಹಣೆ ಬಾಕಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*2* ಎಂದು ಗುರುತಿಸಲಾಯಿತು. ದಿಃ *18-11-2020* ರ ಒಂದು ತಿಳುವಳಿಕೆ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*3* ಎಂದು ಗುರುತಿಸಲಾಯಿತು. ದಿಃ *25-11-2020* ರಂದು ಮುಖ್ಯಾಧಿಕಾರಿಗಳು ಪುರಸಭೆ ತರೀಕೆರೆ, ತರೀಕೆರೆ ಟೌನ್ ರವರಿಗೆ ನೀಡಿದ ಒಂದು ಅರ್ಜಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*4* ಎಂದು ಗುರುತಿಸಲಾಯಿತು. ಆರು ಛಾಯ ಚಿತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-*5* ರಿಂದ ನಿಪಿ-*10* ಎಂದು ಗುರುತಿಸಲಾಯಿತು. ಒಂದು ಸಿಡಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*10(ಎ)* ಎಂದು ಗುರುತಿಸಲಾಯಿತು.

*ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲ*ರಿಂದಃ

ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯ್ತು.

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

ಓ. ಕೇ. ಸ. ಇ. ಎ. ಒ.

Sd/-

*ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು*

*ಪ್ರ.ದ.ನ್ಯಾ.ದಂ. ರವರು, ತರೀಕೆರೆ.*